Akashvani : Bangalore
Regional Bulletin In Kannada
28.06.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

28.06.2026 / 18.40 hrs

---

ಮುಖ್ಯಾಂಶಗಳು

೧. ಅಮಲು ಪದಾರ್ಥ ಬೆರೆಸಿದರೆ ಎಲ್ಲಾ ರೀತಿಯ ಪಾನ್ ಮಸಾಲಾ, ಗುಟ್ಕಾ ನಿಷೇಧ ; ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ

೨. ಟೋಲ್ ಮುಕ್ತ ಹೆಬ್ಬಾಳ ಮೂರು ಪಥ ಜೋಡಿ ಸುರಂಗ ಮಾರ್ಗಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೩. ರಾಜ್ಯವನ್ನು ಸಂಪೂರ್ಣ ಆರೋಗ್ಯಕರ ಮತ್ತು ವ್ಯಸನಮುಕ್ತವಾಗಿಸುವತ್ತ ಕ್ರಮ : ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್

೪. ರಾಜ್ಯದೆಲ್ಲೆಡೆ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಯಶಸ್ವಿ

---

ಮಾದಕ ಪದಾರ್ಥಗಳನ್ನು ಬೆರಕೆ ಮಾಡಿದರೆ ಎಲ್ಲ ರೀತಿಯ ಪಾನ್ ಮಸಾಲಾ, ಗುಟ್ಕಾ ಮಾರಾಟವನ್ನು ನಿಷೇಧ ಮಾಡುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿಂದು ಏರ್ಪಡಿಸಿದ್ದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸಂಸ್ಥಾಪನಾ ದಿನಾಚರಣೆ ಹಾಗೂ ನಶಾ ಮುಕ್ತ ಭಾರತ ಅಭಿಯಾನಲ್ಲಿ ಮಾತನಾಡಿದರು.

ಪಾನ್ ಮಸಾಲಾ, ಗುಟ್ಕಾ, ಅಡಿಕೆ ಮತ್ತಿತರ ಪದಾರ್ಥಗಳಲ್ಲಿ ಅಮಲು ಬರುವ ವಸ್ತುಗಳನ್ನು ಬೆರಕೆ ಮಾಡಿ ಮಾರಾಟ ಮಾಡುತ್ತಿರುವುದು ತಮ್ಮ ಗಮನಕ್ಕೆ ಬಂದಿದೆ. ತಕ್ಷಣ ನಿಲ್ಲದಿದ್ದರೆ ಎಲ್ಲ ರೀತಿಯ ಪಾನ್ ಮಸಾಲಾ, ಗುಟ್ಕಾ ಪದಾರ್ಥಗಳ ಮಾರಾಟವನ್ನು ರಾಜ್ಯದಲ್ಲಿ ನಿಷೇಧ ಮಾಡಲಾಗುವುದು ಎಂದು ಎಚ್ಚರಿಸಿದ್ದಾರೆ.

ಮಾದಕದ್ರವ್ಯ ಮುಕ್ತ ರಾಜ್ಯವನ್ನಾಗಿ ರೂಪಿಸುವುದು ಸರ್ಕಾರದ ಗುರಿ, ಅದಕ್ಕಾಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಮಾದಕ ವ್ಯಸನ ತಡೆಯುವಿಕೆ ದೊಡ್ಡ ಸವಾಲಾಗಿದ್ದು, ಎಲ್ಲರೂ ಒಂದಾಗಿ ಸೇರಿ, ಯುವಜನರು ಈ ವ್ಯಸನದ ಸುಳಿಗೆ ಸಿಲುಕದಂತೆ ತಡೆಯಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಧ್ವನಿ : ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

---

ಹೆಬ್ಬಾಳ ಭಾಗದ ಸಂಚಾರ ದಟ್ಟಣೆಗೆ ಮುಕ್ತಿ ನೀಡುವುದು ಹಾಗೂ  ಬೆಂಗಳೂರಿನ ಸಂಚಾರ ದಟ್ಟಣೆಯನ್ನು ಮುಂದಿನ ದಿನಗಳಲ್ಲಿ ಬಗೆಹರಿಸುವುದೇ ಸರ್ಕಾರದ ಉದ್ದೇಶ" ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಮೇಖ್ರಿ ವೃತ್ತದಿಂದ ಹೆಬ್ಬಾಳ ಜಂಕ್ಷನ್ ವರೆಗೂ ಸುರಂಗ ರಸ್ತೆ ನಿರ್ಮಾಣಕ್ಕೆ ಇಂದು ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

೧.೫ ಕಿಲೋ ಮೀಟರ್ ಉದ್ದದ 'ಕಟ್ ಅಂಡ್ ಕವರ್ ಟನಲ್' ಇದಾಗಿದ್ದು. ಇದು ಟೋಲ್ ಮುಕ್ತವಾಗಿರಲಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರವೇ ಈ ಯೋಜನೆಗೆ ಹಣ ಭರಿಸಲಿದೆ, ಮುಂದಿನ ೫೦ ವರ್ಷಕ್ಕೆ ಯೋಜನೆ ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

ಮೇಕೆದಾಟು ಯೋಜನೆ ಸಂಬಂಧ ಸುಪ್ರೀಂ ಕೋರ್ಟ್ ತೀರ್ಪು ರಾಜ್ಯದ ಪರವಾಗಿದೆ. 'ನಮ್ಮ ನೀರು ನಮ್ಮ ಹಕ್ಕು' ಹೋರಾಟಕ್ಕೆ ಎಂದರು.

---

ನಶೆ ಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ರಾಜ್ಯವನ್ನು ಸಂಪೂರ್ಣವಾಗಿ ಆರೋಗ್ಯಕರ ಮತ್ತು ವ್ಯಸನಮುಕ್ತವಾಗಿಸುವತ್ತ ಕ್ರಮಕೈಗೊಳ್ಳಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸೂಚಿಸಿದ್ದಾರೆ.

ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಮತ್ತು ನಶಾ ಮುಕ್ತ ಭಾರತ್ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಮಾಜ ಮತ್ತು ರಾಷ್ಟ್ರಕ್ಕೆ ಉತ್ತಮ ಭವಿಷ್ಯವನ್ನು ಸೃಷ್ಟಿಸಲು ಅರಿವು, ಜವಾಬ್ದಾರಿ ಮತ್ತು ಸಾಮೂಹಿಕ ಪ್ರಯತ್ನ ಅತ್ಯಗತ್ಯ ಆದ್ದರಿಂದ ಇಂದಿನ ಯುವ ಪೀಳಿಗೆ ಆರೋಗ್ಯಕರ ಮತ್ತು ವ್ಯಸನ ಮುಕ್ತ ರಾಷ್ಟ್ರವನ್ನು ನಿರ್ಮಿಸುವತ್ತ ಹೆಜ್ಜೆ ಇಡಬೇಕು ಎಂದರು.

ಕಾರ್ಯಕ್ರಮದಲ್ಲಿ ರಾಜೀವ್ ಗಾಂಧಿ ವಿಶ್ವ ವಿದ್ಯಾಲಯಯಾದ ಕುಲಪತಿ ಡಾ.ಭಗವಾನ್ ಮಾದಕ ವಸ್ತು ವ್ಯಸನ ಮುಕ್ತ ರಾಷ್ಟ್ರಕ್ಕಾಗಿ ಪ್ರತಿಜ್ಞಾ ವಿಧಿ ಬೋಧಿಸಿದರು.

---

ಪ್ರತಿ ವರ್ಷದಂತೆ ಈ ವರ್ಷವೂ ಜೂನ್ ೨೮ ರಂದು ರಾಷ್ಟ್ರಿಯ ಲಸಿಕಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಇಂದಿನಿದಂದ ನಾಲ್ಕು ದಿನಗಳ ಕಾಲ ಹಮ್ಮಿಕೊಳ್ಳಲಾಗಿರುವ ಮೊದಲ ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಪ್ರತಿ ಮಗುವಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ನೀಡಲಾಗುತ್ತಿದ್ದು, ಅಂದಾಜು ೬೨ ಲಕ್ಷ ಮಕ್ಕಳನ್ನು ತಲುಪವ ಗುರಿ ಹೊಂದಲಾಗಿದೆ.

ರಾಜ್ಯದ ಎಲ್ಲಾ ಆಸ್ಪತ್ರೆ, ಅಂಗನವಾಡಿಗಳಲ್ಲದೆ ಗುಡ್ಡಗಾಡು ಪ್ರದೇಶ, ಕಾಮಗಾರಿ ಪ್ರದೇಶ, ವಲಸೆ ಪ್ರದೇಶಗಳು, ಪಟ್ಟಣ, ನಗರ ಪ್ರದೇಶಗಳು, ರೈಲು ನಿಲ್ದಾಣಗಳು, ಕೊಳಚೆ ಪ್ರದೇಶಗಳು ಸೇರಿದಂತೆ ರಾಜ್ಯದ ಮೂಲೆ-ಮೂಲೆಗಳಲ್ಲಿ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಭವಿಷ್ಯದಲ್ಲಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ ಪೋಲಿಯೊ ಮೈಲಿಟಿಸ್' ವೈರಸ್ ನಿಯಂತ್ರಣಕ್ಕಾಗಿ ಸರ್ಕಾರ ಅಭಿಯಾನದ ರೂಪದಲ್ಲಿ ಪೋಲಿಯೊ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ವಿಧಾನಸಭೆ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ಹೇಳಿದ್ದಾರೆ. ಹಾವೇರಿಯಲ್ಲಿಂದು ನಡೆದ ಲಸಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಜಿಲ್ಲೆಯ ಅಂಗನವಾಡಿ ಕೇಂದ್ರಗಳು, ಸಾರ್ವಜನಿಕ ಸ್ಥಳಗಳು ಸೇರಿದಂತೆ ವಿವಿಧ ಕಡೆಗಳಲ್ಲಿ ಪೋಲಿಯೊ ಹಾಕಿಸಲು ವ್ಯವಸ್ಥೆ ಮಾಡಲಾಗಿದೆ ಎಂದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಡಾ. ಕೆ.ಎನ್.ಅನುರಾಧ ಚಾಲನೆ ನೀಡಿದರು.

ಕೊಪ್ಪಳದ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ವಿಧಾನ ಪರಿಷತ್ ಸದಸ್ಯ ಹೇಮಲತಾ ನಾಯಕ ಚಾಲನೆ ನೀಡಿ ಮಾತನಾಡಿ, ಪೋಲಿಯೋ ಮುಕ್ತ ಭಾರತದ ಕನಸು

ನನಸಾಗಿದೆ ಪ್ರಧಾನಿ ನರೇಂದ್ರ ಮೋದಿ ಅವರ ದೂರ ದೃಷ್ಟಿಯ ಆಡಳಿತ ಪೋಲಿಯೋ ಮುಕ್ತ ಯೋಜನೆಗೆ ನೆರವಾಗಿದೆ ಎಂದು ಹೇಳಿದರು.

ಬಳ್ಳಾರಿಯ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಮೇಯರ್ ಪಿ.ಗಾದೆಪ್ಪ ಮಕ್ಕಳಿಗೆ ಪೋಲಿಯೋ ಹನಿ ಹಾಕುವುದರ ಮೂಲಕ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು ಆರೋಗ್ಯವಂತ ಮಕ್ಕಳಿಗಾಗಿ ಅಂಗವಿಕಲತೆ ಬಾರದಿರಲು ಪೋಷಕರು ತಮ್ಮಮಕ್ಕಳಿಗೆ ತಪ್ಪದೇ ಪೊಲೀಯೋ ಲಸಿಕೆ ಹಾಕಿಸಿ ಎಂದು ಮಾನವಿ ಮಾಡಿದರು.

ಚಿತ್ರದುರ್ಗ ಜಿಲ್ಲೆಯಲ್ಲಿಯಂದು ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್, ದೇಶದಲ್ಲಿ ಪೋಲಿಯೊ ಮುಕ್ತ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿಯಾಗಿ ಹಮ್ಮಿಕೊಳ್ಳುತ್ತಿರುವ ಪಲ್ಸ್ ಪೋಲಿಯೊ ಅಭಿಯಾನವು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ನಿರ್ಣಾಯಕವಾಗಿದೆ ಎಂದು ತಿಳಿಸಿದ್ದಾರೆ.

ಪೋಲಿಯೊ ಎಂಬುದು ಮಕ್ಕಳಲ್ಲಿ ಶಾಶ್ವತ ಅಂಗವೈಕಲ್ಯ ಉಂಟು ಮಾಡುವ ಗಂಭೀರ ರೋಗವಾಗಿದ್ದು, ಇದನ್ನು ತಡೆಗಟ್ಟುವ ಅತ್ಯಂತ ಪರಿಣಾಮಕಾರಿ ಮಾರ್ಗ ಪೋಲಿಯೊ ಲಸಿಕೆ ಎಂದು ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಇಂದಿನಿಂದ ನಾಲ್ಕು ದಿನಗಳ ಕಾಲ ಪಲ್ಸ್ ಪೋಲಿಯೋ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಭಿಯಾನದಲ್ಲಿ ಭಾಗವಹಿಸಿ ಮಾತನಾಡಿದ ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ್ ಅವರು ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಲಸಿಕೆ ತಲುಪುವಂತೆ ಕ್ರಮ ಕೈಗೊಂಡು, ಶೇಕಡ ೧೦೦ ರಷ್ಟು ಗುರಿ ಸಾಧಿಸಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಗದಗ ನಗರದ ಎಂಸಿಎಚ್ ಆಸ್ಪತ್ರೆಯಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನದಲ್ಲಿಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಭಾಗವಹಿಸಿದರು. ನಂತರ ಮಾತನಾಡಿದ ಅವರು, ಪೋಲಿಯೋ ಎಂಬುದು ಮಕ್ಕಳಲ್ಲಿ ಶಾಶ್ವತ ಅಂಗವೈಕಲ್ಯ ಉಂಟುಮಾಡುವ ಗಂಭೀರ ವೈರಾಣುಜನ್ಯ ಕಾಯಿಲೆಯಾಗಿದ್ದು, ಅದರ ವಿರುದ್ಧದ ಪರಿಣಾಮಕಾರಿ ರಕ್ಷಣೆಯೇ ಪೋಲಿಯೊ ಲಸಿಕೆ ಎಂದು ತಿಳಿಸಿದ್ದಾರೆ.

---

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಇಂದು ಕೊಲ್ಲೂರು ಶ್ರೀಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಲ್ಲೂರು ದೇವಸ್ಥಾನಕ್ಕೆ ಬರುವ ಭಕ್ತರಿಗೆ ಪಾರ್ಕಿಂಗ್, ವಸತಿ, ದರ್ಶನ ಸೇರಿದಂತೆ ಎಲ್ಲ ರೀತಿಯ ಮೂಲಭೂತ ಸೌಕರ್ಯ ನೀಡುವ ನಿಟ್ಟಿನಲ್ಲಿ ಸಮಗ್ರ ಯೋಜನೆ ತಯಾರಿಸಲಾಗಿದೆ ಎಂದರು.

---

ಹಿರಿಯ ಪತ್ರಕರ್ತ ಮತ್ತು ಕನ್ನಡ ಚಲನಚಿತ್ರ ನಿರ್ದೇಶಕ ಎನ್.ಎಸ್.ಶಂಕರ್ ಬೆಂಗಳೂರಿನಲ್ಲಿಂದು ನಿಧನರಾದರು. ಅವರಿಗೆ ೬೭ ವರ್ಷ ವಯಸ್ಸಾಗಿತ್ತು. ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಅನೇಕ ಗೌರವಗಳಿಗೆ ಅವರು ಪಾತ್ರರಾಗಿದ್ದರು.

ಲೇಖನಿಯ ಮೂಲಕ ಸಮಾಜದ ವಿದ್ಯಮಾನಗಳನ್ನು ಸೂಕ್ಷ್ಮವಾಗಿ ವಿಶ್ಲೇಷಿಸುತ್ತಿದ್ದ ಕ್ರಿಯಾಶೀಲ ವ್ಯಕ್ತಿ ಎನ್.ಎಸ್.ಶಂಕರ್ ಅವರ ನಿಧನದ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಮಾಧ್ಯಮದ ಮೂಲಕ ಸಂತಾಪ ಸೂಚಿಸಿದ್ದಾರೆ.

ಪತ್ರಕರ್ತರಾಗಿ, ಸಿನಿಮಾ ನಿರ್ದೇಶಕರಾಗಿ, ಜನಪ್ರಿಯ ಅಂಕಣಕಾರರಾಗಿ ಗುರುತಿಸಿಕೊಂಡಿದ್ದ ಅವರು, ಕನ್ನಡ ದಲಿತ ಸಾಹಿತ್ಯ ಕ್ಷೇತ್ರಕ್ಕೆ ಹಲವು ಪ್ರಶಂಸನೀಯ ಕೃತಿಗಳನ್ನು ಕೊಡುಗೆಯಾಗಿ ನೀಡಿದ್ದಾರೆ. ಅವರ ಅಗಲಿಕೆ ಮಾಧ್ಯಮ ಕ್ಷೇತ್ರ ಹಾಗೂ ಸಾಹಿತ್ಯ ವಲಯಕ್ಕೆ ತುಂಬಲಾರದ ನಷ್ಟ ಎಂದರು.

ಭಗವಂತನು ಮೃತರ ಆತ್ಮಕ್ಕೆ ಸದ್ಗತಿಯನ್ನು ನೀಡಲಿ, ಅವರ ಕುಟುಂಬಸ್ಥರಿಗೆ ಹಾಗೂ ಹಿತೈಷಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿ ಕರುಣಿಸಲಿ ಎಂದು ತಿಳಿಸಿದ್ದಾರೆ.

---

ಬೆಂಗಳೂರು ದಕ್ಷಿಣ ಜಿಲ್ಲೆಯ ಮಾಗಡಿ ಮತ್ತು ಹಾರೋಹಳ್ಳಿ ತಾಲ್ಲೂಕಿನಲ್ಲಿ ಹೊಸದಾಗಿ ಪುನರ್ ರಚನೆಯಾದ ಒಟ್ಟು ೮ ಗ್ರಾಮ ಪಂಚಾಯಿತಿಗಳಿಗೆ ಆಯ್ಕೆಯಾಗಬೇಕಾದ ಪ್ರಾದೇಶಿಕ ಚುನಾವಣಾ ಕ್ಷೇತ್ರವ್ಯಾಪ್ತಿಗೆ ಸದಸ್ಯರ ಸಂಖ್ಯೆ ಕರಡು ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಈ ಕುರಿತು ಪ್ರಗತಿ ಪರಶೀಲನಾ ಸಭೆಯನ್ನು ರಾಮನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿರುವವರು ಜುಲೈ ೪ ರಂದು ನಡೆಯಲಿರುವ ಸಭೆಯಲ್ಲಿ ಹಾಜರಾಗುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

__________ ಮುಕ್ತಾಯ _________